ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ: 080-22343901, 22343980

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಮಾತಂವಿ:42:ಸೇವಾಸಿಂಧು:2018-19

ದಿನಾಂಕ:24.04.2019

**ಸುತ್ತೋಲೆ**

ವಿಷಯ : ಸೇವಾಸಿಂಧು ಇ-ಪೋರ್ಟಲ್‌ನ ಆಡಳಿತಾತ್ಮಕ ಬಳಕೆಗೆ ಅಗತ್ಯವಾದ Login credential ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಇಡಿ 11/e-gov 2019, ಬೆಂಗಳೂರು ದಿನಾಂಕ:07.03.2019.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1) ಸರ್ಕಾರಿ ಆದೇಶದನ್ವಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಾದ ದಾಖಲಾತಿಗಳನ್ನು ಆನ್-ಲೈನ್ ಮೂಲಕ ಶೀಘ್ರವಾಗಿ ತಲುಪಿಸಲು ಸಾಧ್ಯವಾಗುವಂತೆ ಸೇವಾಸಿಂಧು ಇ-ಪೋರ್ಟಲ್ ಅನ್ನು ಅಭಿವೃದ್ಧಿಪಡಿಸಲಾಗಿದ್ದು, ಸದರಿ ಇ-ಪೋರ್ಟಲ್ ಈಗ ಸಾರ್ವಜನಿಕರ ಬಳಕೆಗೆ ಲಭ್ಯವಿದೆ. ಈ ಇ-ಪೋರ್ಟಲ್ ಅನ್ನು ಉಪಯೋಗಿಸಿ ವಿದ್ಯಾರ್ಥಿಗಳಿಗೆ ಅಗತ್ಯವಾದ ದಾಖಲಾತಿಗಳನ್ನು ಒದಗಿಸಲು ಸಾಧ್ಯವಾಗುವಂತೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು, ಗ್ರಂಥಪಾಲಕರು, ಅಧೀಕ್ಷಕರು ಮತ್ತು ಕಾರ್ಯನಿರ್ವಾಹಕರಿಗೆ ಈಗಾಗಲೇ ತರಬೇತಿ ನೀಡಲಾಗಿದೆ. ಈಗ ಈ ಎಲ್ಲಾ ಸಿಬ್ಬಂದಿಗೂ Login credential (Username & password)ಅನ್ನು ಪ್ರತ್ಯೇಕವಾಗಿ ಸೃಜಿಸಲಾಗಿದ್ದು, ಇವುಗಳನ್ನು EXCEL ಸ್ವರೂಪದಲ್ಲಿ ಎಲ್ಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಇ-ಮೇಲ್ ವಿಳಾಸಕ್ಕೆ ಕಳುಹಿಸಿಕೊಡಲಾಗಿದೆ. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು, ಗ್ರಂಥಪಾಲಕರು, ಅಧೀಕ್ಷಕರು ಮತ್ತು ಕಾರ್ಯನಿರ್ವಾಹಕರು ತಮಗೆ ನಿಗದಿಪಡಿಸಲಾಗಿರುವ password ಗಳನ್ನು ಮೊದಲ ಬಾರಿ Login ಆಗಲು ಮಾತ್ರ ಬಳಸಿಕೊಂಡು, ನಂತರದ ಉಪಯೋಗಕ್ಕಾಗಿ ತಮ್ಮ ಆಯ್ಕೆಯ passwordಗೆ ಬದಲಾಯಿಸಿಕೊಳ್ಳಬೇಕೆಂದು ಸೂಚಿಸಲಾಗಿದೆ.

24/4/7

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ,

ಎಲ್ಲ ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ

ಪ್ರತಿಯನ್ನು

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ ಮತ್ತು ಗುಲ್ಬರ್ಗಾ- ಮಾಹಿತಿಗಾಗಿ
2. ಕಾಲೇಜು ಶಿಕ್ಷಣ ಆಯುಕ್ತರ/ನಿರ್ದೇಶಕರ/ಮುಖ್ಯ ಆಡಳಿತಾಧಿಕಾರಿಗಳ/ಹೆಚ್ಚುವರಿ ನಿರ್ದೇಶಕರ ಆಪ್ತ ಶಾಖೆಗೆ-ಮಾಹಿತಿಗಾಗಿ
3. ಮಾಹಿತಿ ತಂತ್ರಜ್ಞಾನಾಧಿಕಾರಿಗಳು- ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ
4. ಕಛೇರಿ ಪ್ರತಿ.